**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 9051/2022**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ–ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ. ರಾಜಣ್ಣ ಮತ್ತು ಇತರರು

:: **ದೋಷಾರೋಪಣೆ** ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿತರಾದ–

1) ಶ್ರೀ. ರಾಜಣ್ಣ ಬಿನ್ ಲೇಟ್ ಶಿವಣ್ಣ
ವಯಸ್ಸು ಸುಮಾರು 55 ವರ್ಷ,

2) ಶ್ರೀ. ತೇಜೋಕರ್ ಬಿನ್ ಜವರೇಗೌಡ
ವಯಸ್ಸು ಸುಮಾರು 49 ವರ್ಷ,

3) ಶ್ರೀಮತಿ. ಲಕ್ಷ್ಮಿ ಬಿನ್ ತೇಜೋಕರ್
ವಯಸ್ಸು ಸುಮಾರು 43 ವರ್ಷ,

4) ಶ್ರೀ. ಮಹದೇವ ಜೆ ಪಿ ಬಿನ್ ಲೇಟ್ ಶಿವಣ್ಣ
ವಯಸ್ಸು ಸುಮಾರು 52 ವರ್ಷ,

ನಂಜನಗೂಡು ತಾಲ್ಲೂಕಿನ ವಿದ್ಯಾನಗರ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ–

ಮೊದಲನೆಯದಾಗಿ ದಿನಾಂಕ 29.03.2022 ರಂದು ಬೆಳಿಗ್ಗೆ 09.30 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ದೇವಿರಮ್ಮನಹಳ್ಳಿ, ಗೇಟ್ ಬಳಿ ಇರುವ ಚಾಸಾ–1–ಶ್ರೀಮತಿ.ನಾಗಮ್ಮರವರ ಮನೆಯ ಮುಂಭಾಗದಲ್ಲಿ ಚಾಸಾ–1 ಮತ್ತು 2 ರವರು ಮನೆಯ ಮುಂದೆ ನಿಂತಿದ್ದಾಗ ಅಂಗಡಿ ಮಳಿಗೆಯನ್ನು ಖಾಲಿ ಮಾಡುವ ವಿಚಾರದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ಮತ್ತು 2 ರವರ ಜೊತೆ ಜಗಳ ತೆಗೆದು, ಆರೋಪಿಗಳೆಲ್ಲರು ಚಾಸಾ–1 ರವರನ್ನು ತಬ್ಬಿ ಹಿಡಿದುಕೊಂಡು ಒಂದು ಮುಂದೆ ಹೋಗದಂತೆ ಅಕ್ರಮವಾಗಿ

ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ತಬ್ಬಿಕೊಂಡು ಆಕೆಯ ಕೈ ಹಿಡಿದು ಎಳೆದಾಡಿ ಆಕೆಗೆ ಮಾನಭಂಗ ಮಾಡುವ ಉದ್ದೇಶದಿಂದ ಚಾಸಾ-1 ರವರ ಮೇಲೆ ಅಪರಾಧಿಕ ಬಲ ಪ್ರಯೋಗ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಮಾರಕಾಯುಧವಾದ ಕಲ್ಲಿನಿಂದ ಚಾಸಾ-1 ರವರ ಕೆಳ ದವಡೆಯ ಹಲ್ಲಿನ ಬಳಿ ಹೊಡೆದಿದ್ದು, 2 ನೇ ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-1 ರವರ ಹೊಟ್ಟೆಗೆ ಮತ್ತು ಆಕೆಯ ಬಲಗೈಗೆ ಹೊಡೆದಿದ್ದಲ್ಲದೆ, ಚಾಕುವಿನಿಂದ ಚಾಸಾ-1 ರವರಿಗೆ ಸ್ವ-ಇಚ್ಛೆಯಿಂದ ತಿವಿಯಲು ಬಂದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 4 ನೇ ಆರೋಪಿಯಾದ ನೀವು ಕೈಗಳಿಂದ ಚಾಸಾ-1 ರವರ ಎದೆಗೆ ಹೊಡೆದಿದ್ದು, 3 ನೇ ಆರೋಪಿಯಾದ ನೀವು ಜಗಳ ಬಿಡಿಸಲು ಬಂದ ಚಾಸಾ-2 ರವರನ್ನು ಕೆಳಕ್ಕೆ ಜಾಡಿಸಿ ತಳ್ಳಿ ಬೀಳಿಸಿ ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳೆಲ್ಲರು ಚಾಸಾ-1 ಮತ್ತು 2 ರವರನ್ನು ಉದ್ದೇಶಿ "ನಿಮ್ಮನ್ನು ಕೊಲೆ ಮಾಡದೆ ಬಿಡುವುದಿಲ್ಲ" ಎಂದು ಜೀವಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ-1 ಮತ್ತು 2 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು

ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ರಿಂದ 4 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2– ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ರಿಂದ 4 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 12.05.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.